## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 12 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 13.12.2021 |
| ಉತ್ತರಿಸುವ ಸಚಿವರು | : | ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಬಡವರ ಅನ್ನಭಾಗ್ಯದ ಅಕ್ಕಿಯನ್ನು ಪಾಲಿಶ್ ಮಾಡಿ ವಿದೇಶಿಗಳಿಗೆ ರಫ್ತು ಮಾಡುತ್ತಿರುವ ಬೃಹತ್ ಕಾಳದಂಧೆಯು ಅವ್ಯಾಹತವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅನ್ನಭಾಗ್ಯದ ಅಕ್ಕಿಯನ್ನು ಪಾಲಿಶ್ ಮಾಡುತ್ತಿರುವ ದುರುಪಯೋಗ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿವೆ. ಆದರೆ ಅನ್ನಭಾಗ್ಯದ ಅಕ್ಕಿಯನ್ನು ಪಾಲಿಷ್ ಮಾಡಿ ವಿದೇಶಗಳಿಗೆ ರಫ್ತು ಮಾಡುತ್ತಿರುವ ಯಾವುದೇ ಪ್ರಕರಣಗಳು ದಾಖಲಾಗಿರುವುದಿಲ್ಲ. |
| (ಆ) | ಹಾಗಿದ್ದಲ್ಲಿ, ಅಕ್ಕಿ ಗಿರಣಿಗಳೇ ಸದರಿ ಅಕ್ರಮದ ಕೇಂದ್ರಗಳಾಗಿದ್ದು, ಕಾಳದಂಧೆಯನ್ನು ತಡೆಯುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು;(ವಿವರ ಒದಗಿಸುವುದು) | ಸಾರ್ವಜನಿಕ ವಿತರಣಾ ಪದ್ಧತಿಯನ್ನು ಜಾರಿಗೆ ತರಲು ಎಲ್ಲಾ ಫಲಾನುಭವಿಗಳ ಮಾಹಿತಿಯನ್ನು ಅವರ ಆಧಾರ್ ನೋಂದಣಿಗೆ ಜೋಡಣೆ ಮಾಡಿದ್ದು ಸಂಪೂರ್ಣ ಆನ್‌ಲೈನ್ ದತ್ತಾಂಶ ಜಾರಿಗೊಳಿಸಲಾಗಿದೆ ಹಾಗೂ ಪ್ರತೀ ಮಾಹೆಯ ಸಂಪೂರ್ಣ ವಿತರಣೆಯನ್ನು ನ್ಯಾಯಬೆಲೆ ಅಂಗಡಿ ಮಟ್ಟದಲ್ಲಿ ಆಧಾರ್(ಪಾಸ್) ಮೂಲಕ ವಿತರಿಸುವಂತೆ ಜಾರಿಗೊಳಿಸಲಾಗಿದೆ. ಅಕ್ರಮ ದಾಸ್ತಾನು, ಮತ್ತು ಕಾಳಸಂತೆ ವಹಿವಾಟುಗಳು ನಡೆಯುವುದನ್ನು ತಡೆಗಟ್ಟಿ ನಿರ್ದಿಷ್ಟ ಫಲಾನುಭವಿಗಳಿಗೆ ಪಡಿತರ ಆಹಾರ ಧಾನ್ಯಗಳು ತಲುಪುವುದನ್ನು ಖಾತರಿ ಪಡಿಸಿಕೊಳ್ಳಲು ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅಗತ್ಯ ವಸ್ತುಗಳ ಕಾಯ್ದೆ 1955 ಮತ್ತು ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ 2013 ರ ಅಡಿಯಲ್ಲಿ ಹೊರಡಿಸಿರುವ ಆದೇಶಗಳಡಿಯಲ್ಲಿ ಕಾನೂನು ಕ್ರಮ ಜರುಗಿಸಲು ಆಹಾರ, ನಾಗರಿಕ, ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯಲ್ಲಿ ಇಲಾಖೆ ಅಧಿಕಾರಿಗಳನ್ನೊಳಗೊಂಡ ರಾಜ್ಯ ಮಟ್ಟದಲ್ಲಿ ಆಹಾರ ಜಾಗೃತಿ ಮತ್ತು ತನಿಖಾ ದಳವನ್ನು ರಚಿಸಲಾಗಿದೆ.<br><br>ಅಗತ್ಯ ವಸ್ತುಗಳ ಕಾಯ್ದೆಯಡಿ ಒಟ್ಟು 314 ಪ್ರಕರಣಗಳನ್ನು ದಾಖಲಿಸಲಾಗಿದ್ದು, ಈ ಪೈಕಿ 309 ಪ್ರಕರಣಗಳಲ್ಲಿ ಎಫ್.ಐ.ಆರ್ ದಾಖಲಿಸಲಾಗಿದೆ. ಅಂದಾಜು ರೂ. 8,23,78,691.16 ಮೌಲ್ಯದ ಒಟ್ಟು 38,530.67 ಕ್ವಿಂಟಾಲ್ ಅಕ್ಕಿ, 538.64 ಕ್ವಿಂಟಾಲ್ ಗೋಧಿ ವಶಪಡಿಸಿಕೊಳ್ಳಲಾಗಿದೆ. |

| | | |
|---|---|---|
| | | ರಾಜ್ಯ ಮಟ್ಟದ ಆಹಾರ ಜಾಗೃತಿ ಮತ್ತು ತನಿಖಾ ದಳವು 21 ಪ್ರಕರಣಗಳನ್ನು ಪತ್ತೆ ಹಚ್ಚಿ 12,868.87 ಕ್ವಿಂಟಾಲ್ ಸಾರ್ವಜನಿಕ ಪಡಿತರ ವ್ಯವಸ್ಥೆಗೆ ಸೇರಿದ ಅಕ್ಕಿ, 50.26 ಕ್ವಿಂಟಾಲ್ ಗೋಧಿ ಹಾಗೂ 507.71 ಕ್ವಿಂಟಾಲ್ ರಾಗಿಯನ್ನು ವಶಪಡಿಸಿಕೊಂಡಿದ್ದು, ಸದರಿ ಆಹಾರಧಾನ್ಯಗಳ ಮೌಲ್ಯ ರೂ. 5,80,49,312 ಆಗಿರುತ್ತದೆ. ಹಾಗೂ ಅಕ್ರಮ ವ್ಯವಹಾರ ನಡೆಸಿರುವ ಆರೋಪಿತರ ವಿರುದ್ಧ ಎಫ್.ಐ.ಆರ್. ದಾಖಲಿಸಲಾಗಿದೆ. |
| (ಇ) | ಸದರಿ ಅಕ್ರಮಗಳಂತಹ ಎಷ್ಟು ಪ್ರಕರಣಗಳನ್ನು ಆಹಾರ ಇಲಾಖೆಯು ಈವರೆಗೆ ಪತ್ತೆ ಹಚ್ಚಿದೆ; ಹಾಗೂ ಇಂತಹವರ ವಿರುದ್ಧ ಯಾವ ಕ್ರಮಗಳನ್ನು ಕೈಗೊಂಡಿದೆ; | 335 ಪ್ರಕರಣಗಳು ವಿಚಾರಣೆ ಹಂತದಲ್ಲಿವೆ. |
| (ಈ) | ಎಷ್ಟು ಪ್ರಮಾಣದ ಅನ್ನಭಾಗ್ಯದ ಅಕ್ಕಿಯನ್ನು ಅಕ್ರಮ ದಂಧೆಕೋರರಿಂದ ವಶಪಡಿಸಕೊಳ್ಳಲಾಗಿದೆ; | ಒಟ್ಟು 51,399.54 ಕ್ವಿಂಟಾಲ್ ಅನ್ನಭಾಗ್ಯ ಯೋಜನೆಯ ಅಕ್ಕಿಯನ್ನು ವಶಪಡಿಸಿಕೊಳ್ಳಲಾಗಿದೆ. |
| (ಉ) | ಬಡವರ ಅನ್ನಭಾಗ್ಯದ ಅಕ್ಕಿಯನ್ನು ನೇರವಾಗಿ ಬಡವರಿಗೆ ತಲುಪಿಸಲು ಮತ್ತು ಅಕ್ರಮ ದಂಧೆಕೋರರ ಪಾಲಾಗದಂತೆ ತಡೆಯಲು ಸರ್ಕಾರ ಕೈಗೊಂಡ ಸೂಕ್ತ ಕ್ರಮಗಳೇನು? | 'ಆ' ರಲ್ಲಿ ಮಾಹಿತಿಯನ್ನು ಒದಗಿಸಲಾಗಿದೆ. |

ಆನಾಸ 284 ಡಿಆರ್‌ಎ 2021 (ಇ-ಆಫೀಸ್)

(ಉಮೇಶ್ ವಿ. ಕತ್ತಿ)
ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ
ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು